**ಕರ್ನಾಟಕ ಸರ್ಕಾರ**

**ಸಂಖ್ಯೆ:** ನಅಇ 107 ಎಂಎಲ್ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:17.06.2021

**ಇವರಿಂದ :**

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ,
4ನೇ ಮಹಡಿ, ವಿಕಾಸಸೌಧ,
ಬೆಂಗಳೂರು.

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು,
2. ರಾಜ್ಯದ ಎಲ್ಲಾ ಉಪವಿಭಾಗಾಧಿಕಾರಿಗಳು,
3. ರಾಜ್ಯದ ಎಲ್ಲಾ ತಹಶೀಲ್ದಾರರು,
4. ರಾಜ್ಯದ ಎಲ್ಲಾ ಯೋಜನಾ ನಿರ್ದೇಶಕರು.

ಮಾನ್ಯರೆ,

**ವಿಷಯ:-** ಕೋವಿಡ್-19 ಹಿನ್ನೆಲೆಯಲ್ಲಿ ನಗರ ಸ್ಥಳೀಯ ಸಂಸ್ಥೆಗಳ ಸಾರ್ವತ್ರಿಕ ಚುನಾವಣೆ / ಉಪ ಚುನಾವಣೆ ಹಾಗೂ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳ ಚುನಾವಣೆ ಮುಂದೂಡುವ ಬಗ್ಗೆ.

**ಉಲ್ಲೇಖ:-** 1.ಪ್ರಕರಣ ಸಂ:ಸಿ:177/2021ರಲ್ಲಿ ಸಚಿವ ಸಂಪುಟವು ತೆಗೆದುಕೊಂಡಿರುವ ನಿರ್ಣಯ ದಿನಾಂಕ:26.04.2021.
2.ಇದೇ ಸಮಸಂಖ್ಯೆ ಪತ್ರ ದಿನಾಂಕ:27.04.2021.

~**********~

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯಾದ್ಯಂತ ಕೋವಿಡ್-19 ಪ್ರಕರಣಗಳು ಹೆಚ್ಚಾಗುತ್ತಿದ್ದು ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಾದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಚುನಾವಣೆ ನಡೆಸುವುದು ಬಾಕಿ ಇದ್ದಲ್ಲಿ, ಚುನಾವಣೆಯನ್ನು ಕೂಡಲೇ ಮುಂದೂಡುವಂತೆ ಉಲ್ಲೇಖ (2)ರ ಪತ್ರದಲ್ಲಿ ನಿರ್ದೇಶನ ನೀಡಲಾಗಿದೆ.

ಮುಂದುವರೆದು, ಉಲ್ಲೇಖ (1)ರ ಸಚಿವ ಸಂಪುಟದ ನಿರ್ಣಯದ ಹಿನ್ನಲೆಯಲ್ಲಿ, ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ (ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳು ಹಾಗೂ ಮಹಾನಗರಪಾಲಿಕೆಗಳು) ಸಾವತ್ರಿಕ ಚುನಾವಣೆ /ಉಪ ಚುನಾವಣೆ ಹಾಗೂ ಸದರಿ ಸಂಸ್ಥೆಗಳ ಅಧ್ಯಕ್ಷರು – ಉಪಾಧ್ಯಕ್ಷರು ಚುನಾವಣೆಗಳನ್ನು ಸಹ ದಿನಾಂಕ:26.04.2021 ರಿಂದ ಮುಂದಿನ 6 ತಿಂಗಳ ಅವಧಿಗೆ ಮುಂದೂಡುವ ಬಗ್ಗೆ ಸಚಿವ ಸಂಪುಟವು ತೀರ್ಮಾನಿಸಿದ್ದು, ಅದರಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ತಮಗೆ ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

17.6.2021

(ಕೆ.ಎಲ್.ಪ್ರಸಾದ್)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

**ಪ್ರತಿ ಮಾಹಿತಿಗಾಗಿ:**

ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.

Scanned with CamScanner